**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಂಡೂರು**
**ಸಿ.ಸಿ. ನಂ: 152/2024**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | **ಎ. ಶಾಂತಕುಮಾರ** | **ಪಿ.ಡಬ್ಲ್ಯೂ-03** |
| **ತಂದೆಯ ಹೆಸರು** | : | **ಹನುಮಂತಪ್ಪ** | **ಸಿ.ಡಬ್ಲ್ಯೂ-09** |
| **ವಯಸ್ಸು** | : | **46 ವರ್ಷ** | |
| **ಉದ್ಯೋಗ** | : | **ವ್ಯವಸಾಯ** | **ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿನಾಂಕಃ 03.02.2026.** |
| **ವಾಸಸ್ಥಳ** | : | **ಸೋವಿನಹಳ್ಳಿ ಗ್ರಾಮ** | |

**ಸಾಕ್ಷಿಯ ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೊಲೀಸ್‌ರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ. ಸಾಕ್ಷಿ ಪಂಚನಾಮೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಒಂದು ಭಾವಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಸದರಿ ಭಾವಚಿತ್ರವನ್ನು ನಿಪಿ 5 ಎಂದು ಗುರುತಿಸಲಾಯಿತು. ನಿಪಿ 4 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ.

**(ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃ ಎ.ಪಿ.ಪಿ. ರವರಿಂದಃ**

ದಿಃ 05.01.2023 ರಂದು ಸಂಜೆ 6.00 ರಿಂದ 7.00 ರವರೆಗೆ ಚೋರನೂರು ಪೊಲೀಸ್ ಠಾಣಾ ಆವರಣದಲ್ಲಿ ನನ್ನ ಮತ್ತು ಚಾಸಾ 10 ರವರ ಸಮಕ್ಷಮ ಪಂಚನಾಮೆ ಮಾಡಿ ಒಂದು ವಾಹನ ನಂಃಕೆಎ-35-ಎಂ-8672 ಜಪ್ತು ಪಡೆಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು, ನಿಪಿ 4 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಎಲ್ಲ ವಿಚಾರ ಗೊತ್ತಿದ್ದರು ಸಹ

ಆರೋಪಿಗೆ ಸಹಾಯ ಮಾಡುವ ಉದ್ದೇಶಿದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರಃ ಇಲ್ಲ.</u>**

**<u>ಮರು ವಿಚಾರಣೆಃ ಇಲ್ಲ.</u>**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ.ಹೇ.ಕೆ.ಸರಿ.ಇದೆ.**

**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಸಂಡೂರು.**